## ಕರ್ನಾಟಕ ಸರ್ಕಾರ – ಅರಣ್ಯ ಇಲಾಖೆ

### ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಮುಖ್ಯಸ್ಥರು, ಅರಣ್ಯ ಪಡೆ) ಹಾಗೂ ಆಯ್ಕೆ ಪ್ರಾಧಿಕಾರ ಇವರ ಕಚೇರಿ, ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು–560003

## ಪ್ರಕಟಣೆ

**ಅಧಿಸೂಚನೆ ಸಂಖ್ಯೆ: ಬಿ9–ವಅಅ–ವಿವ–5/2014–15 ದಿನಾಂಕ 29–10–2014**

### ವಲಯ ಅರಣ್ಯಾಧಿಕಾರಿ ಹುದ್ದೆಗಳಿಗೆ ನೇರ ನೇಮಕಾತಿ

–0–

110 ವಲಯ ಅರಣ್ಯಾಧಿಕಾರಿ ಹುದ್ದೆಗಳಿಗೆ ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಸಂಬಂಧ ದಿನಾಂಕ 23–09–2015 ರಂದು 1:2 (ಹುದ್ದೆ:ಅಭ್ಯರ್ಥಿ) ಅಂತಿಮ ಪಟ್ಟಿಯನ್ನು ಪ್ರಕಟಿಸಲಾಗಿತ್ತು. ಈ ಪಟ್ಟಿಯಲ್ಲಿರುವ ಅಭ್ಯರ್ಥಿಗಳಿಗೆ ದಿನಾಂಕ 14–10–2015 ರಿಂದ ಮೂಲ ದಾಖಲೆಗಳ ಪರಿಶೀಲನೆ, ದೇಹದಾರ್ಢ್ಯತೆ, ವೈದ್ಯಕೀಯ ಪರೀಕ್ಷೆ ಮತ್ತು ದೈಹಿಕ ತಾಳ್ವಿಕೆ ಪರೀಕ್ಷೆಗಳನ್ನು ಈಗಾಗಲೇ ನಡೆಸಲಾಗಿರುತ್ತದೆ. ಕೆಲವು ಅಭ್ಯರ್ಥಿಗಳ ವೈದ್ಯಕೀಯ ಪರೀಕ್ಷೆಯ ಅಂತಿಮ ವರದಿ ಈವರೆಗೆ ಲಭ್ಯವಾಗದೇ ಇರುವುದರಿಂದ 110 ವಲಯ ಅರಣ್ಯಾಧಿಕಾರಿ ಹುದ್ದೆಯ ಅಂತಿಮ ಆಯ್ಕೆ ಪಟ್ಟಿ ಪ್ರಕಟಗೊಂಡಿರುವುದಿಲ್ಲ. ಎಲ್ಲಾ ಅಭ್ಯರ್ಥಿಗಳ ವೈದ್ಯಕೀಯ ಪರೀಕ್ಷೆಯ ವರದಿ ಈ ಕಚೇರಿಗೆ ಲಭ್ಯವಾದ ಕೂಡಲೇ ಅಂತಿಮ ಪಟ್ಟಿಯನ್ನು ಪ್ರಕಟಿಸಲಾಗುವುದು. ಅಭ್ಯರ್ಥಿಗಳು ಯಾವುದೇ ವಿಧವಾದ ಊಹ ಪೋಹಗಳಿಗೆ ಕಿವಿಗೊಡಬಾರದಾಗಿ ವಿನಂತಿಸಲಾಗಿದೆ. ಕರ್ನಾಟಕ ಅರಣ್ಯ ಇಲಾಖೆಯಲ್ಲಿ ಎಲ್ಲಾ ನೇಮಕಾತಿಗಳು ಪಾರದರ್ಶಕವಾಗಿ ನೇಮಕಾತಿ ನಿಯಮಗಳ ಅನುಸಾರ ಕೈಗೊಳ್ಳಲಾಗುತ್ತಿದೆ ಎಂಬ ಮಾಹಿತಿಯನ್ನು ಅಭ್ಯರ್ಥಿಗಳ ಗಮನಕ್ಕೆ ತರಲಾಗಿದೆ. ಮತ್ತು ಕಾಲಕಾಲಕ್ಕೆ ನೇಮಕಾತಿ ಪ್ರಕ್ರಿಯೆಗಳ ವಿವರಗಳನ್ನು ಇಲಾಖಾ website ನಲ್ಲಿ ಪ್ರಕಟಿಸಲಾಗುವುದು

ಬೆಂಗಳೂರು,
ದಿನಾಂಕ: 02–12–2015

**ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ**
**(ಸಿಬ್ಬಂದಿ ಮತ್ತು ನೇಮಕಾತಿ)**